ಜೆಎಸ್ಎಸ್ ಮಹಾವಿದ್ಯಾಪೀಠ

# ಜೆಎಸ್ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 jsscwk@gmail.com www. jsscwkgl.org

22 ಸೆಪ್ಟೆಂಬರ್ 2026 ರಂದು ಕೊಳ್ಳೇಗಾಲದ ಜೆಎಸ್ಎಸ್ ಮಹಿಳಾ ಕಾಲೇಜಿನಲ್ಲಿ ದೌರ್ಜನ್ಯ ನಿವಾರಣಾ ಸಮಿತಿ ಹಾಗೂ ರಾಜ್ಯಶಾಸ್ತ್ರ ವಿಭಾಗದ ವತಿಯಿಂದ **"ಮಹಿಳಾ ದೌರ್ಜನ್ಯ ತಡೆ ಮತ್ತು ಮಹಿಳಾ ಸಬಲೀಕರಣ"** ಎಂಬ ವಿಷಯ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಉಪನ್ಯಾಸ ನೀಡಲು ಆಗಮಿಸಿದ್ದ ಕೊಳ್ಳೇಗಾಲದ ಹಿರಿಯ ವಕೀಲರಾದ ಶ್ರೀಮತಿ ನಿರ್ಮಲಮಧುಸೂಧನ್ ರವರು ಮಾತನಾಡಿ ಪ್ರಸ್ತುತ ಸಮಾಜದಲ್ಲಿ ಮಹಿಳೆಯರ ಮೇಲೆ ನಿರಂತರವಾಗಿ ಮಾನಸಿಕವಾಗಿ, ದೈಹಿಕವಾಗಿ ದೌರ್ಜನ್ಯವು ನಡೆಯುತ್ತಿದೆ. ಆದ್ದರಿಂದ ಮಹಿಳೆಯರು ತಮ್ಮ ಹಕ್ಕುಗಳ ಬಗ್ಗೆ ತಿಳಿದುಕೊಂಡು ಅನ್ಯಾಯವನ್ನು ಎದುರಿಸುವ ಧೈರ್ಯ ಬೆಳೆಸಿಕೊಳ್ಳಬೇಕು, ಅಗತ್ಯವಿದ್ದಾಗ ಕುಟುಂಬ, ಸಂಸ್ಥೆ ಮತ್ತು ಕಾನೂನು ನೆರವನ್ನು ಪಡೆಯಬೇಕು ಹಾಗೂ ಮಹಿಳಾ ಸಬಲೀಕರಣದಲ್ಲಿ ಶಿಕ್ಷಣ, ಸ್ವಾವಲಂಬನೆ, ಉದ್ಯೋಗ, ಆರ್ಥಿಕ ಸ್ವಾತಂತ್ರ್ಯ, ಕಾನೂನು ಅರಿವು ಮತ್ತು ನಾಯಕತ್ವದ ಗುಣಗಳು ಪ್ರಮುಖ ಪಾತ್ರ ವಹಿಸುತಿವೆ. ಮಹಿಳೆಯರಿಗೆ ಸುರಕ್ಷಿತ ಮತ್ತು ಗೌರವಯುತ ವಾತಾವರಣ ನಿರ್ಮಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಬೇಕೆಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯರಾದ ಡಾ. ಹೆಚ್.ಎಸ್ ಕೊಂಗಳಪ್ಪರವರು ಮಾತನಾಡಿ ಮಹಿಳೆಯರನ್ನು ಗೌರವಿಸುವ ನಮ್ಮ ದೇಶದಲ್ಲಿ ಮಹಿಳೆಯರ ಮೇಲೆ ಉಂಟಾಗುತ್ತಿರುವ ದೌರ್ಜನ್ಯವನ್ನು ತಡೆಯಬೇಕು. ಶಿಕ್ಷಣವು ಮಹಿಳಾ ಸಬಲೀಕರಣದ ಪ್ರಮುಖ ಸಾಧನವಾಗಿದ್ದು ಶೀಕ್ಷಣದ ಮೂಲಕ ಮಹಿಳೆಯರು ಭಯವಿಲ್ಲದೆ, ಸ್ವಾಭಿಮಾನದಿಂದ ಮತ್ತು ಸ್ವಾವಲಂಬನೆಯಿಂದ ಬದುಕಲುಕಲಿಯಬೇಕು ಎಂದು ತಿಳಿಸಿದರು.

ವೇದಿಕೆಯಲ್ಲಿ ರಾಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಜಿ.ಎಸ್ ಸುಮರವರು ಉಪಸ್ಥರಿದ್ದರು. ಕಾರ್ಯಕ್ರಮದಲ್ಲಿ ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.



ಶ್ರೀಮತಿ ನಿರ್ಮಲಮಧುಸೂದನ್, ಹಿರಿಯ ವಕೀಲರು, ಕೊಳ್ಳೇಗಾಲ ಇವರು **" ಮಹಿಳಾ ದೌರ್ಜನ್ಯ ತಡೆ ಮತ್ತು ಮಹಿಳಾ ಸಬಲೀಕರಣ"** ಎಂಬ ವಿಷಯ ಕುರಿತು ವಿಶೇಷ ಉಪನ್ಯಾಸ ನೀಡುತ್ತಿರುವುದು. ಚಿತ್ರದಲ್ಲಿ ಪ್ರಾಂಶುಪಾಲರಾದ ಡಾ.ಹೆಚ್.ಎಸ್.ಕೊಂಗಳಪ್ಪರವರು ಹಾಗೂ ಸಹಾಯಕ ಪ್ರಾಧ್ಯಾಪಕರಾದ ಡಾ. ಎಸ್ ಸುಮರವರನ್ನು ಕಾಣಬಹುದು.



ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು